ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಮುಜರಾಯಿ ದೇವಸ್ಥಾನಗಳ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

180 (21) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಾಸನ ಜಿಲ್ಲೆಯಲ್ಲಿರುವ ಮುಜರಾಯಿ ದೇವಾಲಯಗಳ ಸಂಖ್ಯೆ ಹಾಗೂ ಇವುಗಳ ಸ್ಥಿರಾಸ್ತಿ ಎಷ್ಟು ; (ತಾಲ್ಲೂಕುವಾರು ಮತ್ತು ದೇವಸ್ಥಾನವಾರು ವಿವರ ನೀಡುವುದು)

(ಆ) ಈ ದೇವಾಲಯಗಳಿಗೆ ಸಂಬಂಧಿಸಿದ ಜಮೀನುಗಳು ಒತ್ತುವರಿಯಾಗಿರುವ ಪ್ರಕರಣಗಳೆಷ್ಟು ; ಈ ಒತ್ತುವರಿಯಾಗಿರುವ ಜಮೀನುಗಳನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಪ್ರಕರಣವಾರು ಮಾಹಿತಿ ನೀಡುವುದು)

(ಇ) ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿರುವ ಮುಜರಾಯಿ ದೇವಾಲಯಗಳಿಂದ ಸರ್ಕಾರಕ್ಕೆ ಬಂದ ಆದಾಯವೆಷ್ಟು; ಈ ದೇವಸ್ಥಾನಗಳ ಉಸ್ತುವಾರಿ ಮತ್ತು ರಕ್ಷಣಾ ಕಾರ್ಯಗಳಿಗಾಗಿ ಖರ್ಚಾಗಿರುವ ಮೊತ್ತವೆಷ್ಟು ? (ಪ್ರತಿ ದೇವಸ್ಥಾನದ ವಿವರ ನೀಡುವುದು)